ಒ ಎಸ್ ಃ 16ಃ2018

ಪಿಡಬ್ಲ್ಯು-1

<u>ಸಾಕ್ಷಿಗೆ ದಿನಾಂಕ 25-09-2019 ರಂದು ಪ್ರಮಾಣ ವಚನ ಬೋಧಿಸಲಾಯಿತು</u>

**<u>ಮುಖ್ಯ ವಿಚಾರಣೆಃ ಶ್ರೀ ಡಿಎಸ್‌ಬಿ ವಕೀಲರಿಂದಃ</u>**

ನಾನು ಈ ದಾವೆಯಲ್ಲಿ ವಾದಿ ಇದ್ದು ಈ ದಿನ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದ ಸಾಕ್ಷ್ಯವನ್ನು ಹಾಜರುಪಡಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ.

ವಾದಿ ನನಗೆ ಬರೆದುಕೊಟ್ಟಿರುವ ಅಧಿಕಾರ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು, ಸರ್ವೆ ನಂ. 74ಃ5 ದಾವಾಸ್ತಿಯ ಆರ್‌ಟಿಸಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-2 ಎಂದು, ಪ್ರತಿವಾದಿ 1 ರವರಿಗೆ ನೀಡಿರುವ ನೋಟೀಸಿನ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು, ಅಂಚೆ ತಲುಪೊಪ್ಪಿಗೆಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-4 ಎಂದು, ದಿನಾಂಕ 10.03.1972 ರ ವ್ಯವಸ್ಥಾ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು, ದಿನಾಂಕ 02.04.13 ರ ಒಂದು ದಾನ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು. ಆದುದರಿಂದ ದಾವೆಯಲ್ಲಿ ಕೇಳಿರುವಂತೆ ಡಿಕ್ರಿ ಮಾಡಿಕೊಡಬೇಕಾಗಿ ಪ್ರಾರ್ಥನೆ.

ಪಾಟೀ ಸವಾಲು ಮಾಡಲು ಕಾಲಾವಕಾಶ ಕೋರಿದ್ದು ಕಾಲಾವಕಾಶ ನೀಡಲಾಯಿತು.

ತೆ.ನ್ಯಾ.ಸಾ.ಹೇ. ನನ್ನ ಉ. ಬೆ. ಮಾಡಲಾಯಿತು

ಓ.ಹೇ.ಕೇ.ಸ.ಇದೆ ಎಂದು ಒಪ್ಪಿರುತ್ತಾರೆ

ಸಿವಿಲ್ ನ್ಯಾಯಾಧೀಶರು, ಸುಳ್ಯ.